# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಹೂಡಿ ಉಪವಿಭಾಗ, ಬೆಂಗಳೂರು-48.

ಸಂ:ಬಿಬಿಎಂಪಿ/ಸಕಾಅ/ಹೂಉವಿ/63/2022-23 ದಿನಾಂಕ:01.10.2022

**-:ದಿನಾಂಕ:01.10.2022 ರಂದು ನಡೆದ 54-ಹೂಡಿ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು:-**

ಮಾನ್ಯ ಆಯುಕ್ತರವರ ಆದೇಶದ ದಿನಾಂಕ:21-09-2020ರ ಮೇರೆಗೆ ವಾರ್ಡ್ ಸಮಿತಿಯನ್ನು ರಚಿಸಲಾಗಿದ್ದು, ದಿನಾಂಕ:01.10.2022 ರ ಶನಿವಾರ ಬೆಳಗ್ಗೆ 11.00 ಕ್ಕೆ ವಾರ್ಡ್ ನಂ.105 ಬೆಳತ್ತೂರು ಮತ್ತು ವಾರ್ಡ್ ನಂ.106 ಹೂಡಿ, ಹೂಡಿ ಕಾಮಗಾರಿ ಕಛೇರಿಯಲ್ಲಿ ವಾರ್ಡ್ ಮಟ್ಟದ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಸಲಾಯಿತು. ಸಭೆಯ ಅಧ್ಯಕ್ಷರಾದ ನೋಡಲ್ ಅಧಿಕಾರಿಗಳೂ ಸಭೆಯನ್ನು ಪ್ರಾರಂಭಿಸಿ ಉಪಸ್ಥಿತರಿದ್ದ ಎಲ್ಲಾ ಅಧಿಕಾರಿಗಳಿಗೂ ಹಾಗೂ ಸ್ಥಳೀಯ ಸಂಘ ಸಂಸ್ಥೆಯವರಿಗೆ ಸ್ವಾಗತ ಕೋರಿದ್ದು, ಸಭೆಯನ್ನು ಪ್ರಾರಂಭಿಸಿದರು.

**ಸಭೆಗೆ ಹಾಜರಿದ್ದವರು:-**

| ಕ್ರ.ಸಂ | ಹಾಜರಿದ್ದವರ ಹೆಸರು | ಪದನಾಮ ಅಥವಾ ಇಲಾಖೆ | ಹಾಜರಾತಿ |
|---|---|---|---|
| 1. | ಶ್ರೀ.ಶ್ರೀನಿವಾಸ್ ಮೂರ್ತಿ. | ಅಧ್ಯಕ್ಷರು ವಾರ್ಡ್ ನೋಡಲ್ ಅಧಿಕಾರಿಗಳು ಹಾಗೂ ಸ.ಕಾ.ಅ. ಹೂಡಿ ಉಪವಿಭಾಗ | ಹಾಜರಿದ್ದರು. |
| 2. | ಶ್ರೀ.ಎಂ.ಜಗದೀಶ್ | ಕಾರ್ಯದರ್ಶಿಗಳು ವಾರ್ಡ್ ಎ.ಇ. ವಾರ್ಡ್.ನಂ-54 | ಹಾಜರಿದ್ದರು. |
| 3 | ಶ್ರೀ.ಶ್ರೀನಿವಾಸಯ್ಯ | ಪಿ.ಎಸ್.ಐ. ಕೆ.ಆರ್.ಪುರಂ | ಹಾಜರಿದ್ದರು. |
| 4 | ಶ್ರೀ.ಚಂದ್ರಪ್ಪ | ಕಿರಿಯ ಆರೋಗ್ಯ ನೀರಿಕ್ಷಕರು ಭೈರತಿ ಹೂಡಿ-54 | ಹಾಜರಿದ್ದರು. |
| 5 | ಶ್ರೀ.ವೀರಪ್ಪ | ಕಿರಿಯ ಆರೋಗ್ಯ ನೀರಿಕ್ಷಕರು, | ಹಾಜರಿದ್ದರು. |
| 6 | ಶ್ರೀ.ರಾಮಾಂಜಿನೇಯ್ಯ | ಕುಂಬೇನಾ ಅಗ್ರಹಾರ | ಹಾಜರಿದ್ದರು. |
| 7 | ಶ್ರೀ.ಸತೀಸ್ | ಅಯ್ಯಪ್ಪನಗರ | ಹಾಜರಿದ್ದರು. |
| 8 | ಶ್ರೀ.ಮಹೇಂದ್ರ ಪ್ರಸಾದ್ | ಕೊಡಿಗೇಹಳ್ಳಿ | ಹಾಜರಿದ್ದರು. |
| 9 | ಶ್ರೀ. ಶಂಕರ್ ಪಾಟೀಲ್ | ಬೆಳತ್ತೂರು | ಹಾಜರಿದ್ದರು. |
| 10 | ಶ್ರೀಮತಿ.ರೂಪ.ಕೆ.ಪಿ | CRP Hoodi ಶಿಕ್ಷಣ ಇಲಾಖೆ | ಹಾಜರಿದ್ದರು. |
| 12 | ಶ್ರೀಮತಿ.ನರಸಮ್ಮ (ನಳಿನಿ) | SWM Sup. | ಹಾಜರಿದ್ದರು. |
| 11 | ಶ್ರೀ.ಸನ್ನಿ ಪಾಟೀಲ್ | ಬೆಳತ್ತೂರು | ಹಾಜರಿದ್ದರು. |
| 12 | ಶ್ರೀಮತಿ. ಪ್ರೇಮಾ | ಕಲ್ಯಾಣ ಇಲಾಖೆ ಮಹದೇವಪುರ | ಹಾಜರಿದ್ದರು. |
| 13 | ಶ್ರೀ. ಮಂಜುನಾಥ್ | ಹೂಡಿ | ಹಾಜರಿದ್ದರು. |
| 14 | ಶ್ರೀ.ಕೆ.ಅನಂತಕುಮಾರ್ | ಸಾರ್ವಜನಿಕರು | ಹಾಜರಿದ್ದರು. |

Scanned with CamScanner

**ಸಭೆಯ ನಡುವಳಿಗಳು:-**

- ವಾರ್ಡ್ ಸಮಿತಿ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ನಂ–54 ರವರು ಸಭೆಗೆ ಬಂದಿರುವ ವಾರ್ಡ್ ಸದಸ್ಯರಿಗೆ, ಅಧಿಕಾರಿ/ನೌಕರರುಗಳಿಗೆ ಸ್ವಾಗತಾ ಕೋರಿಸಭೆ ನಡೆಸಿಕೊಡುವಂತೆ ಕೋರಿದರು.
- ಅಧ್ಯಕ್ಷರು ಈ ಹಿಂದೆ ನಡೆದ ವಾರ್ಡ್ ಸಮಿತಿ ಸಭೆಯಲ್ಲಿ ತಿರ್ಮಾನಗಳನ್ನು ಕೈಗೊಂಡಿರುವ ಬಗ್ಗೆ ಅಧಿಕಾರಿ/ನೌಕರರು ಚರ್ಚಿಸಲಾಯಿತ್ತು ಹಾಗೂ ಕ್ರಮವಹಿಸಲು ಸೂಚಿಸಲಾಯಿತ್ತು.
- ಸಭೆಗೆ ಹಾಜರಾಗದ ಅಧಿಕಾರಿಗಳಿಗೆ ಮುಂದಿನ ಸಭೆಗಳಿಗೆ ತಪ್ಪದೇ ಹಾಜರಾಗಲು ಸೂಚಿಸಲಾಯಿತು ಹಾಗೂ ಮುಂದಿನ ಸಭೆಯಲ್ಲಿ ಗೈರುಹಾಜರಾದಲ್ಲಿ ಮೇಲಾಧಿಕಾರಿಗಳಿಗೆ ಶಿಫಾರಸ್ಸು ಮಾಡಲಾಗುವುದು ಎಂದು ತಿಳಿಸಿದರು.

**ಪೋಲೀಸ್ ಇಲಾಖೆ**

1) ರಾಮಾಂಜಿನಪ್ಪ ಕುಂಬೇನಾ ಅಗ್ರಹಾರ ರವರು ಬೆಳತ್ತೂರು ಕಾಲೇಜು ಮುಂದೆ, ಅಕ್ಕ ಪಕ್ಕ 4 ರಸ್ತೆಗಳು ಸೇರಿರು ಕಡೆ ಟ್ರಾಫೀಕ್‌ಜಾಮ್ ಆಗುತ್ತಿರುತ್ತದೆ ಅದರಿಂದ ಸಿಸಿ ಕ್ಯಾಮರಾ ಅಳವಡಿಸಲು ಮತ್ತು ಪೋಲಿಸರನ್ನು ಹೆಚ್ಚು ಮಾಡುವ ಬಗ್ಗೆ ಎಂದು ಸಭೆಯಲ್ಲಿ ತಿಳಿಸಿದರು.
2) ಸತೀಶ್ ಅಯ್ಯಪ್ಪನಗರ ರವರು ಅಯ್ಯಪ್ಪನಗರ ಹೂಡಿ ರಸ್ತೆಯಲ್ಲಿ ಪೋಲಿಸ್ ಕೇಸ್‌ಗಳು ವಾಹನಗಳ ಮೇಲೆ ಹೆಚ್ಚುರುತ್ತವೆ ಎಂದು ಸಭೆಯಲ್ಲಿ ತಿಳಿಸಿದರು.
3) ನಾಗೇಶ್ ಕುಂಬೇನಾ ಅಗ್ರಹಾರ ರವರು ಬೆಳತ್ತೂರು ಮುಖ್ಯ ರಸ್ತೆಯಲ್ಲಿ ಬೆಳಗಿನ ಸಮಯದಲ್ಲಿ ಶಾಲಾ ವಾಹನಗಳಿಗೆ ಟ್ರಾಫೀಕ್‌ಜಾಮ್ ಆಗುತ್ತದೆ ಎಂದು ನಾಗೇಶ್ ರವರು ತಿಳಿಸಿದರು.
4) ಆನಂದ ಬೆಳತ್ತೂರು ರವರು ಬೆಳತ್ತೂರು ಎಚ್‌ಡಿಎಫ್‌ಸಿ ಬ್ಯಾಂಕ್ ಮುಂದೆ ರಸ್ತೆಯಲ್ಲಿ ಹೆಚ್ಚಾಗಿ ತುಂಬಾ ಟ್ರಾಫೀಕ್‌ಜಾಮ್ ಆಗುತ್ತಿರುವುದರಿಂದ ಎಚ್‌ಡಿಎಫ್‌ಸಿ ಮುಂದೆ ಯು ಟರ್ನ್ ಮಾಡಲು ಅವಕಾಶ ಮಾಡಿಕೊಡಲು ಸಭೆಯಲ್ಲಿ ತಿಳಿಸಿದರು.

**ಕ್ರಂ.ಸಂ 1 ರಿಂದ 4ರ ವರೆಗಿನ ದೂರುಗಳ ಬಗ್ಗೆ ಪರಿಶೀಲಿಸಿ ಒಂದುವಾರದೊಳಗಾಗಿ ಕೈಗೊಂಡ ಕ್ರಮಗಳಿಗೆ ಮುಂದಿನ ಸಭೆಗೆ ವರದಿಯೊಂದಿಗೆ ತಿಳಿಸಲಾಯಿತ್ತು.**
**(ಕ್ರಮ:- ಟ್ರಾಫಿಕ್/ಪೋಲೀಸ್ ಇಲಾಖೆ)**

**ಬಿ.ಡಬ್ಲ್ಯೂ.ಎಸ್,ಎಸ್.ಬಿ(BWSSB):-**

1) ರಾಮಾಂಜಿನಪ್ಪ ಕುಂಬೇನಾ ಅಗ್ರಹಾರ ರವರು ಬೆಳತ್ತೂರು ಎಚ್‌ಡಿಎಫ್‌ಸಿ ಬ್ಯಾಂಕ್ ಹತ್ತಿರ ಮ್ಯಾನ್ ಹೋಲ್ ತುಂಬಿ ಹರಿಯುತ್ತಿರುತ್ತವೆ ಎಂದು ಸಭೆಯಲ್ಲಿ ತಿಳಿಸಿದರು.

**ಕ್ರಂ.ಸಂ 1 ರ ವರೆಗಿನ ದೂರುಗಳ ಬಗ್ಗೆ ಪರಿಶೀಲಿಸಿ ಒಂದುವಾರದೊಳಗಾಗಿ ಕೈಗೊಂಡ ಕ್ರಮಗಳಿಗೆ ಮುಂದಿನ ಸಭೆಗೆ ವರದಿಯೊಂದಿಗೆ ತಿಳಿಸಲಾಯಿತ್ತು.**
**(ಕ್ರಮ:- ಸ.ಕಾ.ಅ./ಸ.ಅ/ಬಿ.ಡಬ್ಲ್ಯೂ.ಎಸ್,ಎಸ್.ಬಿ).**

Scanned with CamScanner

**ಬೀದಿ ದೀಪ ಹಾಗೂ ಬೆಸ್ಕಾಂ**

1) ಬೆಳತ್ತೂರು ನಾಗೇಶ್ ನವರು ಬೆಳತ್ತೂರು ಮುಖ್ಯ ರಸ್ತೆಯಲ್ಲಿ ಬೀದಿ ದೀಪಗಳನ್ನು ಅಳವಡಿಸಬೇಕೆಂದು ಸಭೆಯಲ್ಲಿ ತಿಳಿಸಿದರು.

**ಕ್ರಂ.ಸಂ 1 ರ ವರೆಗಿನ ದೂರುಗಳ ಬಗ್ಗೆ ಪರಿಶೀಲಿಸಿ ಒಂದುವಾರದೊಳಗಾಗಿ ಕೈಗೊಂಡ ಕ್ರಮಗಳಿಗೆ ಮುಂದಿನ ಸಭೆಗೆ ವರದಿಯೊಂದಿಗೆ ತಿಳಿಸಲಾಯಿತ್ತು.**
**(ಕ್ರಮ:- ಸ.ಕಾ.ಅ./ಸ.ಅ/ಬೆಸ್ಕಾಂ)**

**ಘನತ್ಯಾಜ್ಯ ನಿರ್ವಹಣೆಯ ಬಗ್ಗೆ:-**

1) ಬೆಳತ್ತೂರು ನಾಗೇಶ್ ನವರು ಬೆಳತ್ತೂರು ಭಾಗದ ಅಪಾರ್ಟ್‌ಮೆಂಟ್‌ಗಳು ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಡೆಂಗ್ಯೂ ಜ್ವರ ಕೇಸ್‌ಗಳು ಹೆಚ್ಚಾಗುತ್ತಿರುತ್ತವೆ ಎಂದು ತಿಳಿಸಿದರು.

**ಕ್ರಂ.ಸಂ 1 ರ ವರೆಗಿನ ದೂರುಗಳ ಬಗ್ಗೆ ಪರಿಶೀಲಿಸಿ ಒಂದುವಾರದೊಳಗಾಗಿ ಕೈಗೊಂಡ ಕ್ರಮಗಳಿಗೆ ಮುಂದಿನ ಸಭೆಗೆ ವರದಿಯೊಂದಿಗೆ ತಿಳಿಸಲಾಯಿತ್ತು.**
**(ಕ್ರಮ:- ಎಸ್.ಡಬ್ಲ್ಯೂ.ಎಂ/ಹಿ.ಆ.ಪ/ಕಿ.ಆ.ಪ)**

**ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**

ಮುಂಜಾಗ್ರತಾ ಕ್ರಮವಾಗಿ ಸಭೆ ಸಮಾರಂಬ ಮಾಡದಂತೆ ತಿಳಿಸಲಾಯಿತ್ತು ಹಾಗೂ ವ್ಯಾಕ್ಸಿನ್‌ನೇಶನ್ ಹಾಕಿಸಲು ಸ್ಥಳಿಯರಿಗೆ ಮುಂಜಾಗ್ರತೆ ವಹಿಸಿ ಕ್ರಮಕೈಗೊಳ್ಳಲು ತಿಳಿಸಿದರು.

Covid-19, ವ್ಯಾಕ್ಸಿನೇಷನ್, Contact Tracing ಮತ್ತು Testing ಮಾಡುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಗೆ ಹಾಜರಾಗದ ಅಧಿಕಾರಿಗಳಿಗೆ ಮುಂದಿನ ಸಭೆಗಳಿಗೆ ತಪ್ಪದೇ ಹಾಜರಾಗಲು ಸೂಚಿಸಲಾಯಿತು. ಸಮಿತಿ ಸಭೆಗೆ ಆಗಮಿಸಿದ ಎಲ್ಲಾ ಅಧಿಕಾರಿಗಳಿಗೂ ಹಾಗೂ ಸಂಘ ಸಂಸ್ಥೆಯ ಸದಸ್ಯರಿಗೂ ನೋಡಲ್ ಅಧಿಕಾರಿಗಳಿಗೂ ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ನೊಡಲ್ ಅಧಿಕಾರಿ ಹಾಗೂ
ಸ.ಕಾ.ಅ. ಹೂಡಿ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಮಹದೇವಪುರ ವಲಯ

ವಾರ್ಡ್ ಸಮಿತಿ ಕಾರ್ಯದರ್ಶಿ
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ-54 ಹೂಡಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಮಹದೇವಪುರ ವಲಯ

Scanned with CamScanner